ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡ(Unauthorized Religious Structures)ಗಳನ್ನು ಗುರುತಿಸುವ ಬಗ್ಗೆ ಸಭೆ: ಮಾನ್ಯ ಆಯುಕ್ತರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತ ಧಾರ್ಮಿಕ ಕಟ್ಟಡ(Unauthorized Religious Structures) ಗಳನ್ನು ಗುರುತಿಸುವ ಸಂಬಂಧ ಇಂದು ಮಾನ್ಯ ಆಯುಕ್ತರು ಎನ್.ಮಂಜುನಾಥ್ ಪ್ರಸಾದ್ ರವರು ಪಾಲಿಕೆ ಕೇಂದ್ರ ಕಛೇರಿ ವಾರ್ ರೂಂ ನಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದರು. ಈ ವೇಳೆ ವಿಶೇಷ ಆಯುಕ್ತರುಗಳಾದ ಜೆ.ಮಂಜುನಾಥ್, ಮನೋಜ್ ಜೈನ್, ಬಸವರಾಜ್, ರಾಜೇಂದ್ರ ಚೋಳನ್, ತುಳಸಿ ಮದ್ದಿನೇನಿ, ರೆಡ್ಡಿ ಶಂಕರ್ ಬಾಬು ಉಪಸ್ಥಿತರಿದ್ದರು. ಹಾಗೂ ಎಲ್ಲಾ ವಲಯಗಳ ಜಂಟಿ ಆಯುಕ್ತರುಗಳು, ಮುಖ್ಯ ಇಂಜಿನಿಯರ್‌ಗಳು, ಕಾರ್ಯಪಾಲಕ ಇಂಜಿನಿಯರ್‌ಗಳು, ಸಹಾಯಕ ಕಾರ್ಯಪಾಲಕ/ಸಹಾಯಕ ಇಂಜಿನಿಯರ್‌ಗಳು, ಕಂದಾಯ ಅಧಿಕಾರಿಗಳು ಹಾಗೂ ಇನ್ನಿತರೆ ಸಂಬAಧಪಟ್ಟ ಅಧಿಕಾರಿಗಳು ವೀಡಿಯೋ ಕಾನ್ಫರೆನ್ಸ್ ಮೂಲಕ ಸಭೆಯಲ್ಲಿ ಭಾಗವಹಿಸಿದ್ದರು.

ಬಿಬಿಎಂಪಿ ವ್ಯಾಪ್ತಿಯ ಸರ್ಕಾರಿ ಹಾಗೂ ಖಾಸಗಿ ಜಾಗ ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ನಿರ್ಮಿಸಿರುವ ಮಂದಿರ, ಮಸೀದಿ, ಚರ್ಚ್, ಗುರುದ್ವಾರ ಸೇರಿದಂತೆ ಎಲ್ಲಾ ಧಾರ್ಮಿಕ ಕಟ್ಟಡಗಳನ್ನು ಸಮಗ್ರವಾಗಿ ಸಮೀಕ್ಷೆ ನಡೆಸಿ ಇದೇ ಫೆಬ್ರುವರಿ 15ಕ್ಕೆ ನಿಖರ ವರದಿ ನೀಡುವಂತೆ ಆಯುಕ್ತರು ಎನ್.ಮಂಜುನಾಥ್ ಪ್ರಸಾದ್ ರವರು ಎಲ್ಲಾ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಆಯುಕ್ತರು, 29 ಸೆಪ್ಟೆಂಬರ್ 2009ರಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಅನಧಿಕೃತವಾಗಿ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳ ಬಗ್ಗೆ ಸಮೀಕ್ಷೆ ನಡೆಸಿ ವರದಿ ನೀಡಬೇಕೆಂಬ ಆದೇಶವಾಗಿದೆ. ಈ ಆದೇಶದಲ್ಲಿ 2009ರ ಮುನ್ನ ನಿರ್ಮಿಸಿರುವ ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ತೆರವುಗೊಳಿಸುವುದು ಅಥವಾ ಸ್ಥಳಾಂತರ ಮಾಡುವುದು ಅಥವಾ ಕ್ರಮಬದ್ಧ(Regularise)ವಾಗಿದೆ ಎಂಬುದನ್ನು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಿ ಸೂಕ್ತಕ್ರಮ ವಹಿಸಬೇಕು. ಈ ಸಂಬಂಧ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅಡ್ಡಿಯಾಗುವಂತಹ ಧಾರ್ಮಿಕ ಕಟ್ಟಡಗಳ ಪಟ್ಟಿ ಮಾಡಿ ನೀಡಿದರೆ ಸಮೀಕ್ಷೆ ಆಧಾರದ ಮೇಲೆ ಅವುಗಳನ್ನು ತೆರವುಗೊಳಿಸಲು ಅನುಮತಿ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

ಇನ್ನು 29 ಸೆಪ್ಟೆಂಬರ್ 2009ರ ನಂತರ ಸಾರ್ವಜನಿಕ ಸ್ಥಳಗಳಲ್ಲಿ ಯಾವುದೇ ರೀತಿಯ ಧಾರ್ಮಿಕ ಕಟ್ಟಡಗಳನ್ನು  ನಿರ್ಮಿಸುವಂತಿಲ್ಲ ಎಂಬ ಆದೇಶವಿದ್ದು, 2009ರ ನಂತರ ಎಲ್ಲೆಲ್ಲಿ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸಿದ್ದಾರೆ ಎಂಬುದನ್ನು ಪಟ್ಟಿಮಾಡಿ ಕೂಡಲೆ ಸಂಬಂಧಪಟ್ಟವರಿಗೆ ಶೋಕಾಸ್ ನೋಟೀಸ್ ಜಾರಿಮಾಡಿ, ಎಷ್ಟು ಧಾರ್ಮಿಕ ಕೇಂದ್ರಗಳಿಗೆ ನೋಟೀಸ್ ಜಾರಿಮಾಡಲಾಗಿದೆ ಎಂಬ ಪಟ್ಟಿಯನ್ನು ನೀಡಬೇಕು. ನೋಟೀಸ್ ನೀಡಿದ ವಾರದಲ್ಲಿ ಸಮಜಾಯಿಷಿ ಪಡೆಯಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಬಳಿಕ ಕಂದಾಯ ಅಧಿಕಾರಿಗಳು ಸ್ಥಳ ಸಮೀಕ್ಷೆ ನಡೆಸಿ ಸಂಬಂಧಪಟ್ಟ ಇಂಜಿನಿಯರ್‌ಗಳು ಪೊಲೀಸ್ ಭದ್ರತೆಯೊಂದಿಗೆ ಸಿಬ್ಬಂದಿ ಹಾಗೂ ಯಂತ್ರೋಪಕರಣಗಳನ್ನು ಬಳಸಿಕೊಂಡು ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ತೆರವುಗೊಳಿಸಬೇಕು ಎಂದು ತಿಳಿಸಿದರು.

ಈ ಹಿಂದೆ ಮಾಡಿರುವ ಸಮೀಕ್ಷೆಯಲ್ಲಿ ಸರ್ಕಾರಿ ಜಾಗದಲ್ಲಿ 1,588 ಅನಧಿಕೃತ ಧಾರ್ಮಿಕ ಕಟ್ಟಡಗಳನ್ನು ನಿರ್ಮಿಸಲಾಗಿದೆ ಎಂಬ ವರದಿಯಲ್ಲಿ ಹೈಕೋರ್ಟ್ ಗೆ ಸಲ್ಲಿಸಲಾಗಿತ್ತು. ಈ ಪೈಕಿ

ಹೈಕೋರ್ಟ್ ನ ಮುಖ್ಯ ನ್ಯಾಯಾಧೀಶರು ಅದನ್ನು ಒಪ್ಪದೆ ಸರ್ಕಾರಿ ಹಾಗೂ ಖಾಸಗಿ ಜಾಗದಲ್ಲಿ ನಿರ್ಮಿಸಿರುವ ಧಾರ್ಮಿಕ ಕಟ್ಟಡಗಳ ಸಮಗ್ರವಾಗ ಮಾಹಿತಿ ನೀಡಬೇಕು ಎಂದು ಸೂಚನೆ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಧಾರ್ಮಿಕ ಕಟ್ಟಡಗಳು ನಿರ್ಮಿಸಿರುವ ಜಾಗ/ಸ್ಥಳದ ದಾಖಲೆ(ಜಮೀನಿನ ಕಾಗದ ಪತ್ರ) ಹಾಗೂ ಧಾರ್ಮಿಕ ಕಟ್ಟಡ ನಿರ್ಮಿಸಲು ಯಾವುದಾದರು ಇಲಾಖೆಯಿಂದ ಅನುಮತಿ ಪಡೆದಿದ್ದಾರೆಯೇ ಎಂಬ ಮಾಹಿತಿ ಸಂಗ್ರಹಿಸಬೇಕು. ಜೊತೆಗೆ ಸರ್ಕಾರಿ ಜಾಗದಲ್ಲಿ ನಿರ್ಮಿಸಲಾಗಿದೆಯಾ/ಖಾಸಗಿ ಜಾಗದಲ್ಲಿ ನಿರ್ಮಿಸಲಾಗಿದೆಯಾ ಎಂಬುದನ್ನು ಗುರುತಿಸಬೇಕು ಎಂದು ಸೂಚನೆ ನೀಡಿದರು.

ಸರ್ಕಾರಿ ಜಾಗ/ಕಟ್ಟಡಗಳ ಮೇಲಿನ ಭಾವಚಿತ್ರ ತೆಗೆಯಲು ಸೂಚನೆ:

ಬಿಬಿಎಂಪಿ ವ್ಯಾಪ್ತಿಯಲ್ಲಿ ಸರ್ಕಾರಿ/ಪಾಲಿಕೆ ಅನುದಾನದಿಂದ ನಿರ್ಮಿಸಿರುವ ಜಾಗ/ಕಟ್ಟಡ(ಕುಡಿಯುವ ನೀರಿನ ಘಟಕ, ಬಸ್ ತಂಗುದಾಣ ಸೇರಿದಂತೆ ಇನ್ನಿತ್ಯಾದಿ....)ಗಳಲ್ಲಿ ರಾಜ್ಯಪಾಲರು, ಮುಖ್ಯಮಂತ್ರಿ ಹಾಗೂ ಮಂತ್ರಿಗಳ ಭಾವಚಿತ್ರಗಳು ಹೊರತುಪಡಿಸಿ ಶಾಸಕರು, ಸ್ಥಳೀಯ ಸದಸ್ಯರುಗಳ ಭಾವಚಿತ್ರಗಳು ಇರುವಂತಿಲ್ಲ. ಈ ಸಂಬಂಧ ಎಲ್ಲೆಲ್ಲಿ ಶಾಸಕರು, ಸ್ಥಳೀಯ ಸದಸ್ಯರುಗಳ ಭಾವಚಿತ್ರಗಳಿವೆ ಅವುಗಳನ್ನು ಕೂಡಲೆ ತೆರವುಗಳಿಸಬೇಕು ಎಂದು ಆಯುಕ್ತರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಡ್ಡಾಯವಾಗಿ ಸುರಕ್ಷಾ ಕ್ರಮಗಳನ್ನು ಪಾಲಿಸಬೇಕು:

ನಗರದಲ್ಲಿ ಬಿಬಿಎಂಪಿ, ಬೆಸ್ಕಾಂ, ಸ್ಮಾರ್ಟ್ ಸಿಟಿ, ಬಿಡಿಎ, ಜಲಮಂಡಳಿ ಸೇರಿದಂತೆ ಇನ್ನಿತರೆ ಯಾವುದೇ ಇಲಾಖೆಯಿಂದ ಕಾಮಗಾರಿಗಳು ನಡೆಯುತ್ತಿದ್ದರೆ ಅಲ್ಲಿ ಕಡ್ಡಾಯವಾಗಿ ಬ್ಯಾರಿಕೇಡ್, ಮಾರ್ಗ ಬದಲಾವಣೆ/ಕಾಮಗಾರಿ ನಡೆಯುವ ನಾಮಫಲಕ, ವಿದ್ಯುತ್ ದೀಪಗಳು ಸೇರಿದಂತೆ ಇನ್ನಿತರೆ ಸುರಕ್ಷಾ ಕ್ರಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಈ ಸಂಬಂಧ ವಿವಿಧ ಇಲಾಖೆಗಳಿಂದ ನಡೆಯುತ್ತಿರುವ ಕಾಮಗಾರಿಗಳ ಬಳಿ ಸುರಕ್ಷಾ ಕ್ರಮಗಳನ್ನು ಪಾಲನೆ ಮಾಡದ ಗುತ್ತಿಗೆದಾರರಿಗೆ ಕೂಡಲೆ ನೋಟೀಸ್ ಜಾರಿಮಾಡಿ ಕಡ್ಡಾಯವಾಗಿ ಸುರಕ್ಷಾ ಕ್ರಮಗಳನ್ನು ಪಾಲಿಸುವಂತೆ ಸೂಚನೆ ನೀಡಬೇಕು ಎಂದು ಆಯುಕ್ತರು ಅಧಿಕಾರಿಗಳಿಗೆ ಸೂಚನೆ ನೀಡಿದರು.